ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1292
ಮಾನ್ಯ ಸದಸ್ಯರ ಹೆಸರು	ಶ್ರೀ ಹೆಚ್.ಎಂ.ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	24.12.2021
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ಹಾಸ್ಟೆಲ್ ಗಳ ಸಂಖ್ಯೆ ಎಷ್ಟು; ಮತ್ತು ಅವು ಯಾವುವು; ಹಾಗೂ ಸಾಮರ್ಥ್ಯವೆಷ್ಟು; ಸ್ವಂತ ಕಟ್ಟಡ ಹೊಂದಿರುವ ಹಾಸ್ಟೆಲ್ ಗಳೆಷ್ಟು; ಮತ್ತು ಬಾಡಿಗೆ ಕಟ್ಟಡಗಳಲ್ಲಿರುವ ಹಾಸ್ಟೆಲ್ ಗಳೆಷ್ಟು; (ತಾಲ್ಲೂಕುವಾರು ಮತ್ತು ಹಾಸ್ಟೆಲ್ ವಾರು ಮಾಹಿತಿ ನೀಡುವುದು)	ರಾಜ್ಯದಲ್ಲಿ ಪ್ರಸ್ತುತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 1301 ಮೆಟ್ರಿಕ್-ಪೂರ್ವ ಹಾಗೂ 1137 ಮೆಟ್ರಿಕ್-ನಂತರದ ಹೀಗೆ ಒಟ್ಟು 2438 ವಿದ್ಯಾರ್ಥಿನಿಲಯಗಳು ಇದ್ದು, ಕ್ರಮವಾಗಿ 69956 ಮತ್ತು 127780 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶದ ಸೌಲಭ್ಯ ಇರುತ್ತದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಒಟ್ಟು 2438 ವಿದ್ಯಾರ್ಥಿನಿಲಯಗಳ ಪೈಕಿ 1502 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 134 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಹಾಗೂ 802 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ. ತಾಲ್ಲೂಕುವಾರು ಮತ್ತು ವಿದ್ಯಾರ್ಥಿನಿಲಯವಾರು ವಿವರಗಳನ್ನು ಇಲಾಖೆಯ ಅಧಿಕೃತ ಜಾಲತಾಣ **http//www.bcwd.karnataka.gov.in** ನಲ್ಲಿ ನೀಡಲಾಗಿದೆ.
ಆ)	ರಾಜ್ಯದಲ್ಲಿ ಪ್ರತಿ ಹಾಸ್ಟೆಲ್ ಗೆ ಕಳೆದೆರಡು ವರ್ಷಗಳಿಂದ ದಾಖಲಾತಿ ಕೋರಿ ಸ್ವೀಕೃತವಾಗಿರುವ ಅರ್ಜಿಗಳೆಷ್ಟು; ಇದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ದಾಖಲಾತಿ ನೀಡಲಾಗಿದೆ; ಹಾಸ್ಟೆಲ್ ಸೀಟು ಪಡೆಯಲು ಸಾಧ್ಯವಾಗದ ವಿದ್ಯಾರ್ಥಿಗಳಿಗೆ ಸರ್ಕಾರವು ಕಲ್ಪಿಸಿರುವ ಸೌಲಭ್ಯಗಳೇನು; (ತಾಲ್ಲೂಕುವಾರು ಮತ್ತು ಹಾಸ್ಟೆಲ್ ವಾರು ಮಾಹಿತಿ ನೀಡುವುದು)	ಕಳೆದ ಎರಡು ವರ್ಷಗಳಲ್ಲಿ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಸ್ವೀಕೃತವಾಗಿರುವ ಹಾಗೂ ದಾಖಲಾತಿ ನೀಡಿರುವ ಅರ್ಜಿಗಳ ವಿವರಗಳನ್ನು ಇಲಾಖೆಯ ಅಧಿಕೃತ ಜಾಲತಾಣ **http//www.bcwd.karnataka.gov.in** ನಲ್ಲಿ ನೀಡಲಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸುವ ದೃಷ್ಟಿಯಿಂದ ಸರ್ಕಾರದ ಆದೇಶ ಸಂಖ್ಯೆ.ಬಿಸಿಡಬ್ಲ್ಯೂ 352 ಬಿಎಂಎಸ್ 2019, ದಿನಾಂಕ 21.1.2020 ಮತ್ತು ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 308 ಬಿಎಂಎಸ್ 2021 ದಿನಾಂಕ 16.7.2021ರಲ್ಲಿ ರಾಜ್ಯದ ವಿವಿಧ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ಸಂಖ್ಯಾಬಲ ಹೆಚ್ಚಳ ಮಾಡಲಾಗಿರುತ್ತದೆ. ಮುಂದುವರೆದು, ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ಅರ್ಜಿ ಸಲ್ಲಿಸಿ ಪ್ರವೇಶ ದೊರಕದ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪರ್ಯಾಯವಾಗಿ ಅನುದಾನದ ಲಭ್ಯತೆಯನುಸಾರ ವಿದ್ಯಾಸಿರಿ ಯೋಜನೆಯಡಿ ಪ್ರತಿ ವಿದ್ಯಾರ್ಥಿಗೆ ಪ್ರತಿ ಮಾಹೆ ರೂ.1500/- ರಂತೆ ಗರಿಷ್ಠ 10 ತಿಂಗಳಿಗೆ ರೂ.15,000/- ಗಳನ್ನು ಮಂಜೂರು ಮಾಡಲಾಗುತ್ತದೆ.

ಇ)	ಈ ಹಾಸ್ಟೆಲ್ ಗಳಲ್ಲಿ ವಿದ್ಯಾರ್ಥಿಗಳಿಗೆ ಕಲ್ಪಿಸಿರುವ ಸೌಲಭ್ಯಗಳೇನು; ಖಾಸಗಿ ಕಟ್ಟಡಗಳಲ್ಲಿರುವ ಹಾಸ್ಟೆಲ್ ಗಳ ಬದಲಿಗೆ ಸ್ವಂತ ಕಟ್ಟಡ ಹೊಂದಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳನ್ನು **ಅನುಬಂಧ-3ರಲ್ಲಿ** ನೀಡಲಾಗಿದೆ. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 802 ವಿದ್ಯಾರ್ಥಿನಿಲಯಗಳಿಗೆ ಪ್ರಸ್ತುತ 659 ವಿದ್ಯಾರ್ಥಿನಿಲಯಗಳಿಗೆ ನಿವೇಶನ ಲಭ್ಯವಿದ್ದು, 151 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿರುತ್ತವೆ. ಪ್ರಸಕ್ತ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ 24 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕೈಗೊಳ್ಳಲು ಅನುಮೋದನೆ ದೊರೆತಿರುತ್ತದೆ. ಬಾಡಿಗೆ ಕಟ್ಟಡಗಳಲ್ಲಿರುವ ವಿದ್ಯಾರ್ಥಿನಿಲಯಗಳಿಗೆ ನಿವೇಶನ ಲಭ್ಯತೆ ಹಾಗೂ ಆಯಾ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಅನುದಾನದ ಲಭ್ಯತೆಯನುಸಾರ ಹಂತ ಹಂತವಾಗಿ ಸ್ವಂತ ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗುವುದು.

ಸಂಖ್ಯೆ: ಹಿಂವಕ 788 ಬಿಎಂಎಸ್ 2021

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಹೆಚ್.ಎಂ.ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)

ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ.1292 ಕ್ಕೆ ಅನುಬಂಧ-3

*****

ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಸೌಲಭ್ಯಗಳ ವಿವರ

1. ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು

- ಆಹಾರ ವೆಚ್ಚ ಮಾಸಿಕ ರೂ.1500/-ರಂತೆ 10 ತಿಂಗಳಿಗೆ
- ಉಚಿತ ವಸತಿ ಸೌಲಭ್ಯ
- ಸಮವಸ್ತ್ರಗಳು 2 ಜೊತೆ
- ಪಠ್ಯಪುಸ್ತಕ ಮತ್ತು ಲೇಖನಸಾಮಗ್ರಿ ವಾರ್ಷಿಕ ರೂ.400/-
- ಜಮಖಾನ ಮತ್ತು ಹೊದಿಕೆಗಳು ಪ್ರತಿ 3 ವರ್ಷಕ್ಕೊಮ್ಮೆ
- ವೈದ್ಯಕೀಯ ವೆಚ್ಚ – 50 ಸಂಖ್ಯಾಬಲದ ವಿದ್ಯಾರ್ಥಿನಿಲಯಕ್ಕೆ ವಾರ್ಷಿಕ ರೂ.5000/-
  50 ಕ್ಕಿಂತ ಮೇಲ್ಪಟ್ಟ ವಿದ್ಯಾರ್ಥಿನಿಲಯಕ್ಕೆ ವಾರ್ಷಿಕ ರೂ.10000/-
- ಪ್ರತಿ ಅರೆಕಾಲಿಕ ಬೋಧಕರಿಗೆ ಮಾಸಿಕ ರೂ.2,000/-ರಂತೆ (6 ತಿಂಗಳಿಗೆ) 3 ಬೋಧಕರು ಪ್ರತಿ ವಿದ್ಯಾರ್ಥಿನಿಲಯಕ್ಕೆ
- ಮಾಸಿಕ ಶುಚಿ ಸಂಭ್ರಮ ಕಿಟ್ (ಸೋಪು, ಡಿಟರ್ಜೆಂಟ್ಸ್ ಕೇಕ್, ಕೊಬ್ಬರಿ ಎಣ್ಣೆ, ಟೂತ್ ಪೇಸ್ಟ್, ಟಾಲ್ಕಂ ಪೌಡರ್) (ಬಾಲಕರಿಗೆ- ರೂ. ರೂ.91.50/-ರ ದರದಲ್ಲಿ ಮತ್ತು ಬಾಲಕಿಯರಿಗೆ- ರೂ.108.50/-ರ ದರದಲ್ಲಿ)
- ಕ್ಷೌರದ ವೆಚ್ಚ ಪ್ರತಿ ವಿದ್ಯಾರ್ಥಿಗೆ ರೂ.60/- ರಂತೆ (ಬಾಲಕರಿಗಾಗಿ ಮಾತ್ರ) (5 ಬಾರಿ ಮಾತ್ರ)
- ಕ್ರೀಡಾ ಸಾಮಗ್ರಿಗಳು ವಾಸ್ತವ ದರದಲ್ಲಿ ನಿಲಯಕ್ಕೆ ಒಂದು ಸೆಟ್ ಪ್ರತಿ ವರ್ಷಕ್ಕೊಮ್ಮೆ
- ರಾಜ್ಯಮಟ್ಟದ ಒಂದು ಆಂಗ್ಲ ಮತ್ತು ಒಂದು ಕನ್ನಡ ದಿನಪತ್ರಿಕೆ ಹಾಗೂ Wisdom Magazine-1
- ವಿದ್ಯಾರ್ಥಿನಿಲಯದ ಗ್ರಂಥಾಲಯಕ್ಕಾಗಿ ಪ್ರಥಮ ಬಾರಿಗೆ ರೂ.50,000/- ನಂತರದ ಪ್ರತಿ ವರ್ಷಕ್ಕೆ ರೂ.5,000/-
- ಮೆಟ್ರಿಕ್-ಪೂರ್ವ ವಿದ್ಯಾರ್ಥಿಗಳಿಗೆ ಪುಸ್ತಕ ಹಾಗೂ ಲೇಖನ ಸಾಮಗ್ರಿಗಳನ್ನು ಇಟ್ಟುಕೊಳ್ಳಲು ಟ್ರಂಕ್ ಗಳ ಪೂರೈಕೆ.
- ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ಕಂಪ್ಯೂಟರ್ ಮತ್ತು ಇಂಟರ್‌ನೆಟ್ ವ್ಯವಸ್ಥೆ.

2. ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು

- ಆಹಾರ ವೆಚ್ಚ ಮಾಸಿಕ ರೂ.1600/-ರಂತೆ 10 ತಿಂಗಳಿಗೆ
- ಉಚಿತ ವಸತಿ ಸೌಲಭ್ಯ
- ಮಾಸಿಕ ಶುಚಿ ಸಂಭ್ರಮ ಕಿಟ್ (ಸೋಪು, ಡಿಟರ್ಜೆಂಟ್ಸ್ ಕೇಕ್, ಕೊಬ್ಬರಿ ಎಣ್ಣೆ, ಟೂತ್ ಪೇಸ್ಟ್, ಟಾಲ್ಕಂ ಪೌಡರ್) (ಬಾಲಕರಿಗೆ- ರೂ.91.50/-ರ ದರದಲ್ಲಿ ಮತ್ತು ಬಾಲಕಿಯರಿಗೆ- ರೂ.108.50/-ರ ದರದಲ್ಲಿ)
- ವೈದ್ಯಕೀಯ ಸೌಲಭ್ಯ - ಪ್ರಥಮ ಚಿಕಿತ್ಸಾ ಪೆಟ್ಟಿಗೆಯೊಂದಿಗೆ ಬರುವ ಎಲ್ಲಾ ವಸ್ತುಗಳು (ವಾಸ್ತವ ದರದಲ್ಲಿ)
- ಜಮಖಾನ ಮತ್ತು ಹೊದಿಕೆಗಳು ಪ್ರತಿ 3 ವರ್ಷಕ್ಕೊಮ್ಮೆ